**C.C.No.205/2019**

(ತೆರದ ನ್ಯಾಯಾಲಯದಲ್ಲಿ ಆದೇಶವನ್ನು ಓದಲಾಯಿತು)
(ಸಂಪೂರ್ಣ ಆದೇಶವನ್ನು ಪ್ರತ್ಯೇಕವಾಗಿ ಇರಿಸಲಾಗಿದೆ.)

**ಆ ದೇ ಶ**

ಅಪರಾಧಿಕ ಪ್ರಕ್ರಿಯಾ ಸಂಹಿತೆ ಕಲಂ 255(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಆರೋಪಿತನನ್ನು ಕರ್ನಾಟಕ ಪೊಲೀಸ ಕಾಯ್ದೆ ಕಲಂ.78(3) ರಡಿಯಲ್ಲಿನ ಶಿಕ್ಷಾರ್ಹ ಅಪರಾಧಕ್ಕೆ ನಿರ್ದೋಷಿಯೆಂದು ತೀರ್ಮಾನಿಸಿ ಬಿಡುಗಡೆ ಮಾಡಲಾಗಿದೆ.

ಆರೋಪಿತನನ್ನು ನ್ಯಾಯಾಲಯಕ್ಕೆ ಬರೆದುಕೊಟ್ಟ ವಯಕ್ತಿಕ ಮುಚ್ಚಳಿಕೆ ಹಾಗೂ ಜಾಮೀನುದಾರನು ಬರೆದುಕೊಟ್ಟ ಮುಚ್ಚಳಿಕೆಯನ್ನು ಅಪರಾಧಿಕ ಪ್ರಕ್ರಿಯಾ ಸಂಹಿತೆಯ ಕಲಂ 437(ಎ) ರನ್ವಯ ಇಂದಿನಿಂದ 6 ತಿಂಗಳವರೆಗೆ ಮುಂದುವರೆಸಲಾಗಿರುತ್ತದೆ.

ದೋಷಾರೋಪಣಾ ಪಟ್ಟಿಯಲ್ಲಿ ಕಾಣಿಸಿದ ಪಿ.ಆರ್.ನಂ.81/2019 ರಲ್ಲಿರುವ ಮುದ್ದೇಮಾಲು-1. ರೂ.1,020/- ನಗದು ಹಣ ಅಪೀಲು ಅವಧಿ ಮುಗಿದ ನಂತರ ಸರ್ಕಾರಕ್ಕೆ ಜಮಾ ಮಾಡಲು ಈ ಮೂಲಕ ಆದೇಶಿಸಲಾಗಿದೆ.

ಮುದ್ದೇಮಾಲು-2 ಒಂದು ಮಟಕಾ ನಂಬರ ಬರೆದ ಚೀಟಿ ಮತ್ತು ಮುದ್ದೇಮಾಲು-3 ಒಂದು ಬಾಲ ಪೆನ್ ಯಾವುದೇ ಮೌಲ್ಯ ಹೊಂದಿರದ ವಸ್ತುಗಳು ಆಗಿರುವುದರಿಂದ, ಅವುಗಳನ್ನು ಅಪೀಲು ಅವಧಿ ಮುಗಿದ ನಂತರ ನಾಶಪಡಿಸಲು ಈ ಮೂಲಕ ಆದೇಶಿಸಲಾಗಿದೆ.

Sd/-

ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳು
ಅಫಜಲಪೂರ.